ಜೆಎಸ್‌ಎಸ್ ಮಹಾವಿದ್ಯಾಪೀಠ
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಬಿ.ಎನ್. ರಸ್ತೆ, ಮೈಸೂರು - 570 025
ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
Ph: 0821-2548236 & 2548380. FAX: 0821-2548238 E-mail: jssautonomous@gmail.com Website: JSSCACS.edu.in

ದಿನಾಂಕ: 26.01.2018

## ಪ್ರಕಟಣೆ ಕೃಪೆಗಾಗಿ

# 69 ನೇ ಗಣರಾಜ್ಯೋತ್ಸವ ಸಮಾರಂಭದ ವರದಿ

ಮೈಸೂರು ನಗರದ ಬಿ.ಎನ್. ರಸ್ತೆಯಲ್ಲಿರುವ ಜೆಎಸ್‌ಎಸ್ ಕಾಲೇಜಿನಲ್ಲಿ 69 ನೇ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು. ಕಾಲೇಜು ಸಮುಚ್ಚಯದ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯರವರು ಧ್ವಜಾರೋಹಣ ನೆರವೇರಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಪ್ರಾಧ್ಯಾಪಕರಾದ ಪ್ರೊ. ಸಿ.ಕೆ.ಎನ್. ರಾಜರವರು ನಮ್ಮ ರಾಷ್ಟ್ರಧ್ವಜ ಹಾಗೂ ರಾಷ್ಟ್ರಗೀತೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಸವಿವರವಾಗಿ ತಿಳಿಸಿದರು. "ರಾಷ್ಟ್ರಧ್ವಜ, ರಾಷ್ಟ್ರಗೀತೆ, ರಾಷ್ಟ್ರದ ಹಾಡಿನ ಹಿನ್ನೆಲೆಯನ್ನು ಅರಿತುಕೊಳ್ಳಬೇಕು. ಭಾರತದ ಅಭಿವೃದ್ಧಿಯ ಮತ್ತು ಐಕ್ಯತೆಯ ಪ್ರತೀಕವಾಗಿ ಅವುಗಳು ನಮ್ಮ ಮುಂದಿವೆ. ಶಿಸ್ತುಬದ್ಧ ಬದುಕನ್ನು ನಡೆಸುವ ಮೂಲಕ ದೇಶದ ಅಭಿವೃದ್ಧಿಯಲ್ಲಿ ಪಾಲ್ಗೊಂಡಾಗ ರಾಷ್ಟ್ರೀಯ ಹಬ್ಬಗಳ ಇಂತಹ ಆಚರಣೆಗೆ ನಿಜವಾದ ಅರ್ಥ ಬರುತ್ತದೆ" ಎಂದರು. ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರೊಂದಿಗಿನ ಅವರ ಒಡನಾಟವನ್ನು ಈ ಸಮಯದಲ್ಲಿ ಸ್ಮರಿಸಿದರು.

ಪದವಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ಸ್ವಾಗತಿಸಿದರು, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಸ್. ಸೋಮಶೇಖರರವರು ವಂದಿಸಿದರು. ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ಸಂಚಾಲಕರಾದ ಲೆಫ್ಟಿನೆಂಟ್ ಎಲ್. ವಿನಯ್ ಕುಮಾರ್‌ರವರು ಕಾರ್ಯಕ್ರಮ ನಿರೂಪಿಸಿದರು. ಕಾಲೇಜಿನ ಎನ್‌ಸಿಸಿ ಕೆಡೆಟ್‌ಗಳು ಆಕರ್ಷಕ ಪಥ ಸಂಚಲನ ನಡೆಸಿಕೊಟ್ಟರು.

(ಪ್ರೊ. ಎಂ. ಮಹದೇವಪ್ಪ)
ಪ್ರಾಂಶುಪಾಲರು

ಗೆ
ಸಂಪಾದಕರು / ವರದಿಗಾರರು

- - - - - - - - - - - - - - -

- - - - - - - - - - - - - - -